ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎರಡನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 27ನೇ ನವೆಂಬರ್, 2013
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	**ಮೂರನೇ ಪಟ್ಟಿ**
ಆ) ದಿನಾಂಕ 26.11.2013ರ ಎರಡನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಮಲ್ಲಿಕಾರ್ಜುನ ಸಿದ್ದರಾಮಪ್ಪ ಖೂಬ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 22(485)	:	**ಮುಖ್ಯಮಂತ್ರಿಗಳು**
ಇ) ದಿನಾಂಕ 26.11.2013ರ ಎರಡನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ತನ್ವೀರ ಸೇಠ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 26(211)	:	**ನಗರಾಭಿವೃದ್ಧಿ ಸಚಿವರು**
ಈ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	**ಮೂರನೇ ಪಟ್ಟಿ**

2. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ ಶೆಟ್ಟರ, ಕೆ.ಜಿ.ಬೋಪಯ್ಯ, ಬಸವರಾಜ್ ಬೊಮ್ಮಾಯಿ, ವಿಶ್ವೇಶ್ವರ ಹೆಗಡೆ ಕಾಗೇರಿ, ಲಕ್ಷ್ಮಣ ಸವದಿ ಹಾಗೂ ಇತರರು ರಾಜ್ಯದಲ್ಲಿ ಕಬ್ಬು ಬೆಳೆಗೆ ಬೆಲೆ ನಿಗದಿಪಡಿಸಲು ಎಸ್‌ಎಪಿ (SAP) ಕಾನೂನು ರೀತ್ಯಾ ಸರ್ಕಾರವು ಕ್ರಮ ಕೈಗೊಳ್ಳದಿರುವ ಬಗ್ಗೆ

ಮತ್ತು

ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಡಿ. ನಾಗರಾಜಯ್ಯ ಹೆಚ್.ಡಿ.ರೇವಣ್ಣ, ಹೆಚ್.ಕೆ. ಕುಮಾರಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಹಾಗೂ ಇತರರು ಕಬ್ಬು, ಭತ್ತ, ಜೋಳ, ದಾಳಿಂಬೆ ಮತ್ತು ದ್ರಾಕ್ಷಿ ಬೆಳೆಗಳಿಗೆ ಸರ್ಕಾರವು ವೈಜ್ಞಾನಿಕ ಬೆಲೆ ನಿಗದಿಪಡಿಸುವ ಬಗ್ಗೆ ಚರ್ಚೆ ಹಾಗೂ ಸರ್ಕಾರದ ಉತ್ತರ.

ಮು.ತಿ.ನೋ.,

2. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಕೆ. ಕುಮಾರಸ್ವಾಮಿ ಹೆಚ್.ಡಿ.ರೇವಣ್ಣ, ಹೆಚ್.ಸಿ. ಬಾಲಕೃಷ್ಣ, ಕೆ.ಎಂ.ಶಿವಲಿಂಗೇಗೌಡ ಹಾಗೂ ಇತರರು ಉತ್ತರ ಕರ್ನಾಟಕದ 9 ಜಿಲ್ಲೆಗಳಿಗೆ ಕಳಸಾ-ಬಂಡೂರಿ ನಾಲಾ ಯೋಜನೆಯನ್ನು ಅನುಷ್ಠಾನಗೊಳಿಸಲು ವಿಳಂಬ ನೀತಿಯನ್ನು ಅನುಸರಿಸುತ್ತಿರುವ ಬಗ್ಗೆ ಚರ್ಚೆ.

3. ಶ್ರೀಯುತರುಗಳಾದ ಆರ್.ಅಶೋಕ, ವಿ.ಸುನೀಲಕುಮಾರ್, ಸಿ.ಟಿ.ರವಿ ಮತ್ತು ಬಿ.ಎನ್. ವಿಜಯಕುಮಾರ ಅವರುಗಳು ರಾಜ್ಯದಲ್ಲಿ ಬ್ಯಾಂಕ್-ಎ.ಟಿ.ಎಂಗಳಲ್ಲಿ ಹಾಗೂ ವಿವಿದೆಡೆ ನಡೆಯುತ್ತಿರುವ ಹಲ್ಲೆ, ದರೋಡೆ ಮತ್ತು ಕೋಮು ಹಿಂಸಾಚಾರ ಘಟನೆಗಳು ಸೇರಿದಂತೆ ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹದಗೆಟ್ಟಿರುವ ವಿಷಯದ ಬಗ್ಗೆ ಚರ್ಚೆ.

3. **ಶಾಸನ ರಚನೆ**

I **ವಿಧೇಯಕಗಳನ್ನು ಮಂಡಿಸುವುದು.**

1) **ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕ, 2013**
ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2) **ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2013**
ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3) **ಕರ್ನಾಟಕ ರಾಜ್ಯ ಮಹಿಳಾ ಆಯೋಗ (ತಿದ್ದುಪಡಿ) ವಿಧೇಯಕ, 2013**
ಶ್ರೀಮತಿ ಉಮಾಶ್ರೀ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ರಾಜ್ಯ ಮಹಿಳಾ ಆಯೋಗ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

ಮು.ತಿ.ನೋ.,

4. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಹೆಚ್.ಡಿ. ರೇವಣ್ಣ ಅವರು ಹೊಳೆನರಸೀಪುರ ತಾಲ್ಲೂಕಿನ ದುದ್ದ, ಪಡುವಲಹಿಪ್ಪೆ ಮತ್ತು ಹರದನಹಳ್ಳಿಗಳ ಸಮುದಾಯ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯಿಂದ ರೋಗಿಗಳಿಗೆ ತೊಂದರೆಯುಂಟಾಗುತ್ತಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

2. ಶ್ರೀ ಕೆ.ಜಿ.ಬೋಪಯ್ಯ ಅವರು ಕೊಡಗು ಜಿಲ್ಲೆ ಮಡಿಕೇರಿ ತಾಲ್ಲೂಕಿನ ಸಂಪಾಜೆ, ಚೆಂಬು, ಪೆರಾಜೆ ಮತ್ತು ಕರಿಕೆ ಗ್ರಾಮಪಂಚಾಯತಿ ವ್ಯಾಪ್ತಿಯಲ್ಲಿ ಅಡಿಕೆ ಬೆಳೆಗೆ ಕೊಳೆ ರೋಗ ಉಂಟಾಗಿ ಬೆಳೆಯು ನಾಶವಾಗಿರುವುದರಿಂದ ರೈತರು ಸಂಕಷ್ಟಕ್ಕೆ ಒಳಗಾಗಿರುವ ಬಗ್ಗೆ ಮಾನ್ಯ ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರ ಗಮನ ಸೆಳೆಯುವುದು.

3. ಶ್ರೀ ಎಂ.ಟಿ. ಕೃಷ್ಣಪ್ಪ ಅವರು 2012-13ನೇ ಸಾಲಿನ ಸುವರ್ಣ ಗ್ರಾಮ ಮತ್ತು ಸಿ.ಎಂ.ಜಿ.ಎಸ್‌ವೈ ಯೋಜನೆಗಳನ್ನು ಮುಂದುವರಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

4. ಶ್ರೀಯುತರಾದ ಬಸವರಾಜ ರಾಯರೆಡ್ಡಿ ಮತ್ತು ಅಪ್ಪಾಜಿ ನಾಡಗೌಡ ಅವರುಗಳು ಕೊಪ್ಪಳ ಜಿಲ್ಲೆಯ ಯಲಬುರ್ಗಾ, ಕುಷ್ಟಗಿ ಹಾಗೂ ಕೊಪ್ಪಳ ತಾಲ್ಲೂಕುಗಳು ಮತ್ತು ಬಿಜಾಪುರ ಜಿಲ್ಲೆಯ ಮುದ್ದೇಬಿಹಾಳ ಮತ್ತು ಇಂಡಿ ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5. ಡಾ|| ಎ.ಬಿ. ಮಾಲಕರೆಡ್ಡಿ ಅವರು ಭಾರತದ ಸಂವಿಧಾನದ ಅನುಚ್ಛೇದ 371 ಜೆ ತಿದ್ದುಪಡಿ ಅನ್ವಯ ಹೈದ್ರಾಬಾದ-ಕರ್ನಾಟಕ ಪ್ರದೇಶದ ಜಿಲ್ಲೆಗಳಲ್ಲಿನ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

6. ಶ್ರೀ ಗುರು ಪಾಟೀಲ ಶಿರವಾಳ ಅವರು ಕೃಷ್ಣಾ ಮೇಲ್ದಂಡೆ ಯೋಜನೆಯ ಆಲಮಟ್ಟಿ ಹಾಗೂ ನಾರಾಯಣಪುರ ಅಣೆಕಟ್ಟಿನಿಂದ ಅಚ್ಚುಕಟ್ಟು ಪ್ರದೇಶದ ರೈತರ ಜಮೀನಿಗೆ ಮಾರ್ಚ್ ಅಂತ್ಯದವರೆಗೆ ನೀರು ಹರಿಸುವ ಬಗ್ಗೆ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

7. ಶ್ರೀಯುತರಾದ ಕೆ.ಎಸ್. ಮಂಜುನಾಥ, ಎಂ.ಕೃಷ್ಣಾರೆಡ್ಡಿ, ಕೆ.ಆರ್. ರಮೇಶಕುಮಾರ ಮತ್ತು ಪಿಳ್ಳ ಮುನಿಶಾಮಪ್ಪ ಅವರುಗಳು ಕರ್ನಾಟಕ ರಾಜ್ಯ ಅಕ್ಷರ ದಾಸೋಹದ ಸಿಬ್ಬಂದಿಯವರಿಗೆ ಕನಿಷ್ಠ ವೇತನ, ಬಿಸಿಯೂಟ ಸೌಲಭ್ಯ ಮತ್ತು ಅವರುಗಳನ್ನು ಶಾಲಾ ಸಿಬ್ಬಂದಿಗಳೆಂದು ಪರಿಗಣಿಸುವುದರ ಜೊತೆಗೆ ಅವರಿಗೆ ವರ್ಗಾವಣೆ ಸೌಲಭ್ಯವನ್ನು ಕಲ್ಪಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

8. ಶ್ರೀ ಬಿ.ಬಿ. ನಿಂಗಯ್ಯ ಅವರು ಮೂಡಿಗೆರೆ ಎಂ.ಜಿ.ಎಂ. ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರ ಕೊರತೆ ಇರುವುದರಿಂದ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

9. ಶ್ರೀಯುತರಾದ ಹೆಚ್.ಡಿ.ರೇವಣ್ಣ, ಕೆ.ಎಂ.ಶಿವಲಿಂಗೇಗೌಡ ಮತ್ತು ಸಿ.ಎನ್. ಬಾಲಕೃಷ್ಣ ಅವರುಗಳು ಹಾಸನ ನಗರದಲ್ಲಿ ಜಿಲ್ಲಾ ನ್ಯಾಯಾಲಯ ಸಂಕೀರ್ಣ ಕಟ್ಟಡದ ಎರಡನೇ ಹಂತದ ಕಾಮಗಾರಿಗಳಿಗೆ ಅವಶ್ಯಕ ಅನುದಾನ ಬಿಡುಗಡೆ ಮಾಡದಿರುವುದರಿಂದ ಕಾಮಗಾರಿಗಳು ಕುಂಠಿತಗೊಂಡಿರುವ ಬಗ್ಗೆ ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರ ಗಮನ ಸೆಳೆಯುವುದು.

10. ಶ್ರೀಯುತರಾದ ಸಿ.ಎನ್. ಬಾಲಕೃಷ್ಣ ಹೆಚ್.ಡಿ.ರೇವಣ್ಣ, ಕೆ.ಎಂ.ಶಿವಲಿಂಗೇಗೌಡ ಅವರುಗಳು ಹಾಸನ ಜಿಲ್ಲೆಯಲ್ಲಿ 2012-13ನೇ ಸಾಲಿನ ಪರಿಶಿಷ್ಟ ಜಾತಿ ಉಪ ಯೋಜನೆ ಕ್ರೋಢೀಕೃತ ಅನುದಾನದಲ್ಲಿ ಪರಿಶಿಷ್ಟ ಜಾತಿಯವರ ಕಾಲೋನಿಗಳಿಗೆ ಸಿ.ಸಿ ರಸ್ತೆ ಮತ್ತು ಒಳಚರಂಡಿಗಳ ಅಭಿವೃದ್ಧಿ ಕಾಮಗಾರಿಗಳಿಗೆ ಅವಶ್ಯಕ ಅನುದಾನವನ್ನು ಬಿಡುಗಡೆ ಮಾಡದಿರುವ ಬಗ್ಗೆ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

11. ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು ರಾಜ್ಯದಲ್ಲಿ ಸರ್ವೆ ಕಾರ್ಯವನ್ನು ಕೈಗೊಳ್ಳಲು ರೂ 300 ರಿಂದ 1200ಗಳ ವರೆಗೆ ವಸೂಲಿ ಮಾಡುತ್ತಿರುವುದರಿಂದ ರೈತರಿಗುಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

12. ಶ್ರೀ ಡಿ. ನಾಗರಾಜಯ್ಯ ಅವರು ತುಮಕೂರು ಜಿಲ್ಲೆ ಕುಣಿಗಲ್ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಮದ್ದೂರು ರಸ್ತೆಯನ್ನು ಕೇಶಿಪ್ ವತಿಯಿಂದ ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

13. ಶ್ರೀ ಪಿ ರಾಜೀವ್ ಅವರು ಕರ್ನಾಟಕ ವಿದ್ಯುತ್ ನಿಗಮ (ವಿಜಿಲೆನ್ಸ್) ದವರು ರೈತರು ಅಕ್ರಮವಾಗಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಪಡೆದಿರುವರೆಂದು ಸುಳ್ಳು ಆರೋಪ ಹೊರಿಸಿ ಮೊಕದ್ದಮೆಗಳನ್ನು ದಾಖಲಿಸುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

14. ಶ್ರೀ ಸಂಜಯ ಪಾಟೀಲ್ ಅವರು ರಾಜ್ಯದಲ್ಲಿ ಅಲ್ಪಸಂಖ್ಯಾತರ ಪೈಕಿ ಮುಸ್ಲಿಂ ವರ್ಗದ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ವಿದ್ಯಾರ್ಥಿವೇತನವನ್ನು ಪಾವತಿಸುತ್ತಿರುವಂತೆ ಕ್ರಿಶ್ಚಿಯನ್ ಮತ್ತು ಜೈನ್ ಧರ್ಮದ ವಿದ್ಯಾರ್ಥಿಗಳಿಗೂ ಆನ್‌ಲೈನ್ ಮೂಲಕ ವಿದ್ಯಾರ್ಥಿ ವೇತನವನ್ನು ನೀಡುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N